ಒಂದನೇ ಅಪರ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಹುಣಸೂರು

ಸಿ.ಸಿ. 194/2019

ಸಿ.ಡಬ್ಲ್ಯೂ -1, ಪಿ.ಡಬ್ಲ್ಯೂ-,1

ದಿ:**18.02.2026 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.**

| | |
|---|---|
| ಸಾಕ್ಷಿಯ ಹೆಸರು | ನಾರಾಯಣಸ್ವಾಮಿ |
| ಗಂಡ/ತಂದೆಯ ಹೆಸರು | ಲೇಟ್ ಪುಟ್ಟಯ್ಯ |
| ವಯಸ್ಸು | 52 ವರ್ಷ |
| ಕೆಲಸ | ಮರಗೆಲಸ |
| ವಾಸಸ್ಥಳ | ಹಗರನಹಳ್ಳಿ |

**<u>ಮುಖ್ಯ ವಿಚಾರಣೆ ಮಾನ್ಯ ಎ.ಪಿ.ಪಿ.ಯವರಿಂದ:</u>**

ಆರೋಪಿತರು ಗೊತ್ತು. ಚಾಸಾ2 ರಿಂದ 6 ಗೊತ್ತು. ನನ್ನ ಮತ್ತು ಆರೋಪಿಯ ನಡುವೆ ಸಣ್ಣ ವಿಚಾರಕ್ಕೆ ಜಗಳವಾಗಿದ್ದು, ಈ ಬಗ್ಗೆ ನಾನು ಪೊಲೀಸರಿಗೆ ಮೌಖಿಕವಾಗಿ ತಿಳಿಸಿದ್ದೇನೆ. ಆ ಸಮಯದಲ್ಲಿ ಪೊಲೀಸರು ಈಗ ತೋರಿಸುತ್ತಿರುವ ಎರಡು ಬರವಣಿಗೆಯ ಮೇಲೆ ನನ್ನ ಸಹಿಯನ್ನು ಪಡೆದಿರುತ್ತಾರೆ. ಸಾಕ್ಷಿ ತನ್ನ ಸಹಿ ಇರುವ ಬರವಣಿಗೆಗಳನ್ನು ನೋಡಿ ಗುರುತಿಸಿದ್ದು, ಅದು ದೂರು ಮತ್ತು ಮಹಜರ್ ಆಗಿದ್ದು, ದೂರನ್ನು ನಿಪಿ-**1** ಎಂದು, ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿಪಿ**1(ಎ)** ಎಂದು ಗುರುತಿಸಲಾಯಿತು. ಮಹಜರ್ ನ್ನು ನಿಪಿ**2** ಎಂದು, ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿಪಿ**2(ಎ)** ಎಂದು ಗುರುತಿಸಲಾಯಿತು. ನಿಪಿ-**1** ಮತ್ತು **2** ರಲ್ಲಿ ಬರೆದಿರುವ ವಿಚಾರಗಳು ನನಗೆ ತಿಳಿದಿಲ್ಲ.

**(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ ಸ.ಸ.ಅ. ಪಾಟೀ ಸವಾಲು ಮಾಡಲು ಅನುಮತಿ ಕೋರಿರುತ್ತಾರೆ. ಅನುಮತಿ ನೀಡಲಾಗಿದೆ.)**

<u>ಪಾಟೀ ಸವಾಲು ಮಾನ್ಯ ಎ.ಪಿ.ಪಿ ರವರಿಂದ:</u>

ದಿ:16.08.2011 ರಂದು ನಾನು ಬಸ್ ಸ್ಟ್ಯಾಂಡ್ ನ ಅರಳಿ ಮರದ ಮುಂದೆ ನಿಂತಿದ್ದಾಗ ಆರೋಪಿತರು ಕೊಲೆ ಬೆದರಿಕೆ ಹಾಕಿರುತ್ತಾರೆ ಎಂದರೆ ಸರಿಯಲ್ಲ. ದಿ:05.05.2013 ರಂದು ಬೆಳಿಗ್ಗೆ 10.30 ಗಂಟೆ ಸಮಯದಲ್ಲಿ ನಾನು ಬಸ್ ನಿಲ್ದಾಣದ ಬಳಿ ಬರುತ್ತಿದ್ದಾಗ ಆರೋಪಿತರು ನನ್ನನ್ನು ಅಡ್ಡಗಟ್ಟಿದರು ಎಂದರೆ ಸರಿಯಲ್ಲ ಹಾಗೂ ಅವಾಚ್ಯಶಬ್ದಗಳಿಂದ ನಿಂದಿಸಿ ಕೊಲೆ ಬೆದರಿಕೆ ಹಾಕಿದರು ಎಂದರೆ ಸರಿಯಲ್ಲ. ಆ ಸಮಯದಲ್ಲಿ ಚಾಸಾ

ಚಾಸಾ3 ಮತ್ತು 4 ರವರು ಜಗಳವನ್ನು ಬಿಡಿಸಿ ಸಮಾಧಾನಪಡಿಸಿದರು ಎಂದರೆ ಸರಿಯಲ್ಲ. ಈಗ ಮೇಲೆ ಓದಿ ಹೇಳಿದ ಹಾಗೆ ದೂರನ್ನು ನೀಡಿರುತ್ತೇನೆ ಎಂದರೆ ಸರಿಯಲ್ಲ.

ದಿ:24.05.2013 ರಂದು ಬೆಳಿಗ್ಗೆ 10 ರಿಂದ 10.45 ಗಂಟೆ ಸಮಯದಲ್ಲಿ ನಾನು ಸ್ಥಳವನ್ನು ತೋರಿಸಿದ್ದ ಮೇರೆಗೆ, ಚಾಸಾ5 ಮತ್ತು 6 ರವರ ಸಮಕ್ಷಮ ನಿಪಿ2 ರಂತೆ ಮಹಜರ್ ಕ್ರಮ ಜರುಗಿಸಿದ್ದರು ಎಂದರೆ ಸರಿಯಲ್ಲ. ಆರೋಪಿತರು ಹಾಗೂ ನೀವು ರಾಜಿ ಆಗಿರುತ್ತೇವೆಂದರೆ ಸರಿ. ರಾಜಿಯಾಗಿರುವ ಕಾರಣದಿಂದ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರುವಿಚಾರಣೆ ಇಲ್ಲ.**

ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಲಾಯಿತು.

ಓ ಹೇ ಕೇ ಸರಿ ಇದೆ.

ಒಂದನೇ ಅಪರ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ,
ಹುಣಸೂರು.